Akashvani : Bangalore
National Bulletin In Kannada
22.06.2024 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

22.06.2024 : 7.35AM

******

**ಮುಖ್ಯಾಂಶಗಳು:**

1. ದೆಹಲಿಯಲ್ಲಿಂದು ಬಾಂಗ್ಲಾದೇಶ ಪ್ರಧಾನಿ ಶೇಖ್‌ಹಸೀನಾ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
2. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅಧ್ಯಕ್ಷತೆಯಲ್ಲಿಂದು ೫೩ನೇ ಜಿಎಸ್‌ಟಿ ಸಮಿತಿ ಸಭೆ
3. ಪರೀಕ್ಷಾ ಅಕ್ರಮ ತಡೆಗೆ ನೂತನ ಸಾರ್ವಜನಿಕ ಪರೀಕ್ಷೆಗಳ ಅಕ್ರಮ ವಿಧಾನಗಳ ತಡೆಗಟ್ಟುವಿಕೆ ಮಸೂದೆ-೨೦೨೪ ಇಂದಿನಿಂದ ಜಾರಿ
4. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಇಂಗ್ಲೆಂಡ್ ವಿರುದ್ಧ ದಕ್ಷಿಣ ಆಫ್ರಿಕಾಗೆ ೭ ರನ್ ಜಯ

********

ಬಾಂಗ್ಲಾದೇಶ ಪ್ರಧಾನಿ ಶೇಖ್ ಹಸೀನಾ ತಮ್ಮ ಎರಡು ದಿನಗಳ ಭಾರತ ಭೇಟಿಗೆ ನಿನ್ನೆ ನವದೆಹಲಿಗೆ ಆಗಮಿಸಿದರು. ದೇಶದಲ್ಲಿ ನೂತನ ಸರ್ಕಾರ ರಚನೆಯಾದ ಬಳಿಕ ದ್ವಿಪಕ್ಷೀಯ ರಾಷ್ಟ್ರದ ಪ್ರತಿನಿಧಿಯೊಬ್ಬರು ಭೇಟಿ ನೀಡುತ್ತಿರುವುದು ಇದೇ ಮೊದಲಾಗಿದೆ. ತಮ್ಮ ಭೇಟಿಯ ಮೊದಲ ದಿನವಾದ ನಿನ್ನೆ ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರೊಂದಿಗೆ ಶೇಖ್ ಹಸೀನಾ ಸಭೆ ನಡೆಸಿದರು. ಸಭೆಯ ಬಳಿಕ ಮಾತನಾಡಿದ ಡಾ. ಜೈಶಂಕರ್, ಶೇಖ್ ಹಸೀನಾ ಅವರ ಭೇಟಿಯು ಉಭಯ ರಾಷ್ಟ್ರಗಳ ಸಂಬಂಧವನ್ನು ಮತ್ತಷ್ಟು ಬಲಪಡಿಸಿದೆ ಎಂದಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿಂದು ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ದ್ವಿಪಕ್ಷೀಯ ಬಾಂಧವ್ಯವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಉಭಯ ನಾಯಕರು ವ್ಯಾಪಕ ಮಾತುಕತೆ

ನಡೆಸಲಿದ್ದಾರೆ. ಭಾರತ ಮತ್ತು ಬಾಂಗ್ಲಾದೇಶಗಳು ಹಲವಾರು ವಿಷಯಗಳ ಕುರಿತು ಹಲವಾರು ಒಪ್ಪಂದಗಳಿಗೆ ಸಹಿ ಹಾಕಲಿವೆ.ತಮ್ಮ ಭೇಟಿಯ ವೇಳೆ ಶೇಖ್ ಹಸೀನಾ ಅವರು, ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರನ್ನು ಭೇಟಿ ಮಾಡಲಿದ್ದಾರೆ.

********

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ನವದೆಹಲಿಯಲ್ಲಿಂದು ೫೩ನೇ ಜಿಎಸ್‌ಟಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಹೊಸ ಸರ್ಕಾರ ರಚನೆಯಾದ ನಂತರ ಮೊದಲ ಬಾರಿಗೆ ಜಿಎಸ್‌ಟಿ ಸಮಿತಿ ಸಭೆ ನಡೆಸಲಾಗುತ್ತಿದೆ. ಕಳೆದ ವರ್ಷ ಅಕ್ಟೋಬರ್ ೭ ರಂದು ಕೊನೆಯ ಜಿಎಸ್‌ಟಿ ಸಮಿತಿ ಸಭೆ ನಡೆದಿತ್ತು. ಈ ಸಭೆಯಲ್ಲಿ ಪರಿಷತ್ತು ಹಲವು ನಿರ್ಣಯಗಳನ್ನು ಕೈಗೊಂಡಿತ್ತು. ಜಿಎಸ್‌ಟಿ ಸಮಿತಿ ಪ್ರಸ್ತಾವಿತ ಜಿಎಸ್‌ಟಿ ಮೇಲ್ಮನವಿ ನ್ಯಾಯಮಂಡಳಿಗಳ ಅಧ್ಯಕ್ಷ ಹಾಗೂ ಸದಸ್ಯರ ನೇಮಕಾತಿ ಅರ್ಹತೆ ಮತ್ತು ವಯಸ್ಸಿನ ಕುರಿತ ಷರತ್ತುಗಳಲ್ಲಿ ತಿದ್ದುಪಡಿ ತರಲು ಶಿಫಾರಸು ಮಾಡಿತ್ತು. ಹಾಗೆಯೇ ಸಿರಿಧಾನ್ಯ ಹಿಟ್ಟಿನ ತಯಾರಿಕೆಗೆ ಯಾವುದೇ ದರವನ್ನು ವಿಧಿಸದಿರಲು ಮಂಡಳಿ ಶಿಫಾರಸು ಮಾಡಿತ್ತು.

********

ವಿವಿಧ ಸಂಸ್ಕೃತಿ ಮತ್ತು ಹಿನ್ನೆಲೆಗಳಿಂದ ಬಂದ ಜನರನ್ನು ಒಟ್ಟುಗೂಡಿಸುವ ಶಕ್ತಿ ಯೋಗಕ್ಕಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನಿನ್ನೆಯ ಯೋಗ ದಿನದ ಆಚರಣೆಯ ಬಳಿಕ ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ, ೧೦ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ವಿಶ್ವದಾದ್ಯಂತ ದೊಡ್ಡ ಪ್ರಮಾಣದಲ್ಲಿ ಆಚರಿಸಲಾಯಿತು. ಯುವಜನತೆ ಉತ್ಸಾಹ ಮತ್ತು ಸಮರ್ಪಣಾ ಭಾವದಿಂದ ಯೋಗದಲ್ಲಿ ಪಾಲ್ಗೊಳ್ಳುತ್ತಿರುವುದು ಸಂತಸ ತಂದಿದೆ ಎಂದಿದ್ದಾರೆ. ಯೋಗಾಭ್ಯಾಸಕ್ಕಾಗಿ ವ್ಯಕ್ತಿಗಳು, ಸಮುದಾಯಗಳು ಮತ್ತು ಸಂಸ್ಥೆಗಳ ಸಾಮೂಹಿಕ ಪ್ರಯತ್ನಗಳಿಗೆ ಹಾಗೂ ಯೋಗವನ್ನು ಜನಪ್ರಿಯಗೊಳಿಸಲು ಶ್ರಮಿಸುತ್ತಿರುವ ಎಲ್ಲರಿಗೂ ಕೃತಜ್ಞತೆಗಳು. ಈ ಪ್ರಯತ್ನಗಳು ಏಕತೆ ಮತ್ತು ಸೌಹಾರ್ದತೆಯನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ, ಮುಂಬರುವ ದಿನಗಳಲ್ಲಿ ಯೋಗವು ಜಗತ್ತನ್ನು ಒಗ್ಗೂಡಿಸಲಿ ಎಂದರು.

********

ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅವ್ಯವಹಾರ ಮತ್ತು ಅಕ್ರಮಗಳನ್ನು ತಡೆಯುವ ಉದ್ದೇಶದಿಂದ ಸಾರ್ವಜನಿಕ ಪರೀಕ್ಷೆಗಳ ಅಕ್ರಮ ವಿಧಾನಗಳ ತಡೆಗಟ್ಟುವಿಕೆ ಮಸೂದೆ, ೨೦೨೪ಅನ್ನು ಕೇಂದ್ರ ಸರ್ಕಾರ ಇಂದಿನಿಂದ ಜಾರಿಗೆ ತರುತ್ತಿದೆ. ಈ ಕಾನೂನಿನಡಿ ಅಪರಾಧಿಗಳಿಗೆ ಗರಿಷ್ಠ ೧೦ ವರ್ಷಗಳ ಜೈಲು ಶಿಕ್ಷೆ ಮತ್ತು ೧ ಕೋಟಿ ರೂಪಾಯಿಗಳವರೆಗೆ ದಂಡ ವಿಧಿಸಲು ಅವಕಾಶವಿರುತ್ತದೆ ಎಂದು ಸಿಬ್ಬಂದಿ ಸಚಿವಾಲಯ ತಿಳಿಸಿದೆ. ಸಾರ್ವಜನಿಕ ಪರೀಕ್ಷೆಗಳ ಅಕ್ರಮ ವಿಧಾನಗಳ ತಡೆಗಟ್ಟುವಿಕೆ ಮಸೂದೆ- ೨೦೨೪, ಫೆಬ್ರವರಿ ೬ ಮತ್ತು ೯ ರಂದು ಲೋಕಸಭೆ ಮತ್ತು ರಾಜ್ಯಸಭೆಯಿಂದ ಅಂಗೀಕರಿಸಲ್ಪಟ್ಟಿದ್ದು, ಫೆಬ್ರವರಿ ೧೨ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಮಸೂದೆಗೆ ಅನುಮೋದನೆ ನೀಡಿದ್ದರು. ಯೂನಿಯನ್ ಪಬ್ಲಿಕ್ ಸರ್ವಿಸ್ ಕಮಿಷನ್, ಸ್ಟಾಫ್ ಸೆಲೆಕ್ಷನ್ ಕಮಿಷನ್, ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ, ರೈಲ್ವೆ ನೇಮಕಾತಿ ಮಂಡಳಿ ಮತ್ತು ಬ್ಯಾಂಕಿಂಗ್ ನೇಮಕಾತಿ ಪರೀಕ್ಷಾ ಸಂಸ್ಥೆಗಳು ನಡೆಸುವ ಸಾರ್ವಜನಿಕ ಪರೀಕ್ಷೆಗಳಲ್ಲಿ ಅಕ್ರಮ ವಿಧಾನಗಳನ್ನು ತಡೆಯಲು ಈ ಕಾಯಿದೆ ಗುರಿ ಹೊಂದಿದೆ. ವಂಚನೆಗೆ ಕಡಿವಾಣ ಹಾಕಲು ಕನಿಷ್ಠ ಮೂರರಿಂದ ಐದು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ವಂಚನೆಯ ಸಂಘಟಿತ ಅಪರಾಧಗಳಲ್ಲಿ ಭಾಗಿಯಾಗಿರುವವರಿಗೆ ಐದರಿಂದ ೧೦ ವರ್ಷಗಳ ಜೈಲು ಶಿಕ್ಷೆ ಮತ್ತು ಕನಿಷ್ಠ ೧ ಕೋಟಿ ರೂಪಾಯಿ ದಂಡ ವಿಧಿಸಲಾಗುತ್ತದೆ.

********

ಆಕಾಶವಾಣಿ ಸುದ್ದಿಯು ಭಾರತದ ಅತ್ಯಂತ ವಿಶ್ವಾಸಾರ್ಹ ಸುದ್ದಿ ಸಂಸ್ಥೆಗಳಲ್ಲಿ ಒಂದು ಎಂದು ಪರಿಗಣಿಸಲಾಗಿದೆ. ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದ ರಾಯಿಟರ್ಸ್ ಇನ್‌ಸ್ಟಿಟ್ಯೂಟ್ ಫಾರ್ ದಿ ಸ್ಟಡಿ ಆಫ್ ಜರ್ನಲಿಸಂ ನಡೆಸಿದ ಇತ್ತೀಚಿನ ಸಮೀಕ್ಷೆಯು, ರಾಷ್ಟ್ರದ ಮಾಧ್ಯಮ ಕ್ಷೇತ್ರದಲ್ಲಿ ಆಕಾಶವಾಣಿ ಸುದ್ದಿಯು ಪ್ರಮುಖ ಸ್ಥಾನವನ್ನು ದೃಢಪಡಿಸಿದೆ. ಡಿಜಿಟಲ್ ಸುದ್ದಿ ವರದಿ ೨೦೨೪ರ ಪ್ರಕಾರ, ಆಕಾಶವಾಣಿ ಸುದ್ದಿಯು ವಿಶ್ವಾರ್ಹತೆಯಲ್ಲಿ ದೇಶದ ಇತರೆ ಪ್ರಮುಖ ಮಾಧ್ಯಮ ಸಂಸ್ಥೆಗಳಿಗಿಂತ ಗಮನಾರ್ಹವಾಗಿ ಹೆಚ್ಚಿನ ಅಂಕಗಳನ್ನು ಪಡೆದಿದೆ. ಈ ಸಾಧನೆ ಕುರಿತು ಪ್ರತಿಕ್ರಿಯಿಸಿದ ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್, ಎಲ್ಲಾ ಸಂದರ್ಭಗಳಲ್ಲಿಯೂ ಸತ್ಯವನ್ನು ಪ್ರಸಾರ ಮಾಡಲು ಆಕಾಶವಾಣಿ ಸುದ್ದಿಯ ಅಚಲ ಬದ್ಧತೆಗೆ ಇದು ಸಾಕ್ಷಿಯಾಗಿದೆ ಎಂದು ಹೇಳಿದ್ದಾರೆ.

********

ಭಾರತೀಯ ಸಾಕ್ಷ್ಯಚಿತ್ರ ದ ಗೋಲ್ಡನ್ ಥ್ರೆಡ್ಗೆ ಅಂತಾರಾಷ್ಟ್ರೀಯ ವಿಭಾಗದಲ್ಲಿ ಅತ್ಯುತ್ತಮ ಸಾಕ್ಷ್ಯಚಿತ್ರವಾಗಿ ಗೋಲ್ಡನ್ ಕಾಂಚ್ ಪ್ರಶಸ್ತಿಯನ್ನು ನೀಡಲಾಗಿದೆ. ೧೮ನೇ ಮುಂಬೈ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಸಮಾರೋಪ ಸಮಾರಂಭದಲ್ಲಿ ಈ ಸಾಕ್ಷ್ಯಚಿತ್ರದ ನಿರ್ದೇಶಕಿ ನಿಶಿತಾ ಜೈನ್ ಅವರಿಗೆ ಚಿತ್ರನಟಿ ಪೂನಂ ದಿಲ್ಲಾನ್ ಪ್ರಶಸ್ತಿ ನೀಡಿ, ಗೌರವಿಸಿದರು. ಸಮಾರಂಭದಲ್ಲಿ ಮಾತನಾಡಿದ ಚಲನಚಿತ್ರೋತ್ಸವದ ನಿರ್ದೇಶಕ ಪ್ರಿತುಲ್ ಕುಮಾರ್, ಈ ಬಾರಿ ಅತಿ ಹೆಚ್ಚು ಸಂಖ್ಯೆಯ ಚಲನಚಿತ್ರಗಳು ನೋಂದಾಯಿಸಿಕೊಂಡಿದ್ದವು. ಚಲನಚಿತ್ರೋತ್ಸವದ ಯಶಸ್ವಿ ಆಯೋಜನೆಗೆ ಸೂಕ್ತ ಸಹಕಾರ ನೀಡಿದ್ದಕ್ಕಾಗಿ ಚಿತ್ರರಂಗ, ಕೇಂದ್ರ ಸರ್ಕಾರ ಹಾಗೂ ಮಹಾರಾಷ್ಟ್ರ ಸರ್ಕಾರಕ್ಕೆ ಧನ್ಯವಾದ ತಿಳಿಸಿದರು. ಅಮೃತಕಾಲದಲ್ಲಿ ಭಾರತ ಎಂಬ ವಿಶೇಷ ವಿಭಾಗದಡಿ ಲೈಫ್ ಇನ್ ಲೂಮ್ ಕಿರುಚಿತ್ರದ ನಿರ್ದೇಶಕ ಎಡ್ಮಂಡ್ ರ್‍ಯಾನ್‌ಸಾನ್ ಅವರಿಗೆ ಅತ್ಯುತ್ತಮ ಕಿರುಚಿತ್ರ ಪ್ರಶಸ್ತಿ ನೀಡಲಾಯಿತು.

********

ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ವಿಚಾರಣಾ ನ್ಯಾಯಾಲಯ ನೀಡಿದ್ದ ಜಾಮೀನಿಗೆ ದೆಹಲಿ ಹೈಕೋರ್ಟ್ ತಡೆ ನೀಡಿದೆ. ದೆಹಲಿಯ ರೋಜ್ ಅವೆನ್ಯೂ ನ್ಯಾಯಾಲಯವು ಜೂನ್ ೨೦ ರಂದು ಕೇಜ್ರಿವಾಲ್ ಅವರಿಗೆ ೧ ಲಕ್ಷ ರೂಪಾಯಿ ಬಾಂಡ್ ಮೇಲೆ ಜಾಮೀನು ನೀಡಿತ್ತು. ಬಳಿಕ ವಿಚಾರಣೆಯ ವೇಳೆ ತನಗೆ ಸೂಕ್ತ ಅವಕಾಶ ನೀಡದೇ ಕೇಜ್ರಿವಾಲ್ ಅವರಿಗೆ ಜಾಮೀನು ನೀಡಿ ವಿಚಾರಣಾ ನ್ಯಾಯಾಲಯ ಆದೇಶಹೊರಡಿಸಿದೆ ಎಂದು ಜಾರಿ ನಿರ್ದೇಶನಾಲಯವು ನಿನ್ನೆ ದೆಹಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಇಡಿ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಸುಧೀರ್ ಕುಮಾರ್ ಜೈನ್ ಮತ್ತು ರವೀಂದ್ರ ದುದೇಜಾ ಅವರಿದ್ದ ನ್ಯಾಯಪೀಠ, ಇ.ಡಿ. ಸಲ್ಲಿಸಿರುವ ಅರ್ಜಿಯ ವಿಚಾರಣೆ ಪೂರ್ಣಗೊಳ್ಳುವವರೆಗೆ ಕೇಜ್ರಿವಾಲ್ ಅವರನ್ನು ಜೈಲಿನಿಂದ ಬಿಡುಗಡೆ ಮಾಡುವಂತಿಲ್ಲ ಎಂದು ತಡೆಯಾಜ್ಞೆ ನೀಡಿತು.

********

ಅನಿವಾರ್ಯ ಕಾರಣಗಳಿಂದಾಗಿ ಜೂನ್ ೨೦೨೪ರ ಜಂಟಿ ಸಿಎಸ್‌ಐಆರ್ - ಯುಜಿಸಿ - ನೆಟ್ ಪರೀಕ್ಷೆಯನ್ನು ಮುಂದೂಡಲಾಗಿದೆ ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ತಿಳಿಸಿದೆ. ಇದೇ ೨೫ರಿಂದ ೨೭ರ ವರೆಗೆ ನಿಗದಿಯಾಗಿದ್ದ ಪರೀಕ್ಷೆಯನ್ನು ಕಾರಣಾಂತರಗಳಿಂದ ಮುಂದೂಡಲಾಗಿದ್ದು, ಪರಿಷ್ಕೃತ ವೇಳಾಪಟ್ಟಿಯನ್ನು ತನ್ನ ಅಧಿಕೃತ ಜಾಲತಾಣದ ಮೂಲಕ ಘೋಷಿಸಲಾಗುವುದು, ಅಭ್ಯರ್ಥಿಗಳು ಯಾವುದೇ ಕುಂದುಕೊರತೆ ಅಥವಾ ಮಾಹಿತಿಗಾಗಿ ಎನ್‌ಟಿಎ ಸಹಾಯವಾಣಿ ಸಂಖ್ಯೆ ೦೧೧-೪೦೭೫೯೦೦೦ ಅಥವಾ ೦೧೧-೬೯೨೨೭೭೦೦ ಮತ್ತು ಜಾಲತಾಣ csirnet@nta.ac.in ಮೂಲಕ ಸಂಪರ್ಕಿಸಬಹುದು.

********

ಐಸಿಸಿ ಟಿ-೨೦ ವಿಶ್ವಕಪ್ ಟೂರ್ನಿಯ ಸೂಪರ್ ೮ರ ಸುತ್ತಿನ ಪಂದ್ಯಗಳು ನಡೆಯುತ್ತಿದ್ದು, ನಿನ್ನೆ ಸೇಂಟ್ ಲೂಸಿಯಾದಲ್ಲಿ ನಡೆದ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ದಕ್ಷಿಣ ಆಫ್ರಿಕಾ ತಂಡ ೭ ರನ್‌ಗಳ ಜಯ ದಾಖಲಿಸಿದೆ. ಟಾಸ್ ಸೋತು, ಮೊದಲು ಬ್ಯಾಟ್ ಮಾಡಿದ ದಕ್ಷಿಣ ಆಫ್ರಿಕಾ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೬೩ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ಇಂಗ್ಲೆಂಡ್, ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೫೬ ರನ್‌ಗಳಿಸಲಷ್ಟೇ ಶಕ್ತವಾಯಿತು. ಪ್ರಸ್ತುತ ಕಿಂಗ್‌ಸ್ಟೌನ್‌ನಲ್ಲಿ ನಡೆಯುತ್ತಿರುವ ಪಂದ್ಯದಲ್ಲಿ ಅಮೆರಿಕ, ವೆಸ್ಟ್ ಇಂಡೀಸ್ ತಂಡಗಳು ಮುಖಾಮುಖಿಯಾಗಿವೆ. ಇಂದು ಸಂಜೆ ಆಂಟಿಗುವಾದ ನಾರ್ತ್‌ಸೌಂಡ್‌ನಲ್ಲಿ ನಡೆಯಲಿರುವ ಪಂದ್ಯದಲ್ಲಿ ಭಾರತ ಹಾಗೂ ಬಾಂಗ್ಲಾದೇಶ ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

********

ಜರ್ಮನಿಯಲ್ಲಿ ನಡೆಯುತ್ತಿರುವ ಯೂರೋಕಪ್-೨೦೨೪ ಫುಟ್ಬಾಲ್ ಪಂದ್ಯಾವಳಿಯಲ್ಲಿ ನಿನ್ನೆ ನಡೆದ ಡಿ ಗುಂಪಿನ ಪಂದ್ಯದಲ್ಲಿ ಪೋಲ್ಯಾಂಡ್ ವಿರುದ್ಧ ಆಸ್ಟ್ರಿಯಾ ತಂಡ ೩-೧ ಗೋಲುಗಳ ಅಂತರದಲ್ಲಿ ಜಯ ದಾಖಲಿಸಿದೆ. ಆಸ್ಟ್ರಿಯಾ ಪರ ಗೆರ್ನಾಟ್ ಟ್ರಾನರ್, ಕ್ರಿಸ್ಟೋಫ್ ಬೋಮ್‌ಗಾರ್ಟ್ನರ್ ಮತ್ತು ಮಾರ್ಕೊ ಅರ್ನಾಟೊವಿಕ್ ಗಳಿಸಿದ ತಲಾ ಒಂದು ಗೋಲು ತಂಡದ

ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿತು. ಆ ಮೂಲಕ ಆಸ್ಟ್ರಿಯಾ ತಂಡ ಕೊನೆಯ ೧೬ರ ಘಟ್ಟಕ್ಕೆ ತಲುಪುವ ಆಸೆ ಜೀವಂತವಾಗಿದೆ.

********

ಇಟಲಿಯ ಗೈಬಾದಲ್ಲಿ ನಡೆಯುತ್ತಿರುವ ಡಬ್ಲ್ಯೂಟಿಎ ವೆನಿಟೊ ಓಪನ್ ಟೆನಿಸ್ ಪಂದ್ಯಾವಳಿಯ ಮಹಿಳೆಯರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಭಾರತದ ಅಂಕಿತಾ ರೈನಾ ಮತ್ತು ಸ್ವಿಟ್ಜರ್ಲೆಂಡ್‌ನ ಸುಸಾನ್ ಬಾಂಡೆಚ್ಚಿ ವಿರುದ್ಧ ಪರಾಭವಗೊಂಡಿದ್ದಾರೆ. ನಿನ್ನೆ ನಡೆದ ಪಂದ್ಯದಲ್ಲಿ ಅಂಕಿತಾ ೪-೬, ೭-೬, ೩-೬ ಸೆಟ್‌ಗಳ ಅಂತರದಲ್ಲಿ ಸೋಲನುಭವಿಸಿದರು.

********

ಕರ್ನಾಟಕದ ದಕ್ಷಿಣ ಒಳನಾಡು ಮತ್ತು ಕರಾವಳಿ, ಕೇರಳ ಮತ್ತು ಗೋವಾದಲ್ಲಿ ಮುಂದಿನ ೪ ದಿನಗಳಲ್ಲಿ ಧಾರಾಕಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

****END****